# ದ್ವಿತೀಯ ಪಿ.ಯು.ಸಿ. ಪ್ರಶ್ನೆ ಪತ್ರಿಕೆ ಮಾದರಿ – 1

## ವಿಷಯ : ಕನ್ನಡ 01

**ಅವಧಿ: 1:30 ಗಂಟೆ** **ಗರಿಷ್ಠ ಅಂಕಗಳು : 50**

---

I. **ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ :** **1x5=5**

1. ಜಾಲಿಯ ರಸಸ್ವಾದ ಹೇಗಿರುತ್ತದೆ?
2. ಬೇಟೆಗಾರ ಯಾರು?
3. ಸರ್ಕಾರಿ ಆಸ್ಪತ್ರೆಯ ಬಗ್ಗೆ ಬಸಲಿಂಗನಲ್ಲಿದ್ದ ಅಭಿಪ್ರಾಯವೇನು?
4. ದುರ್ಗಪ್ಪನ ಪ್ರಕಾರ ತರ್ಲೆ ಡಿಪಾರ್ಟ್‌ಮೆಂಟ್ ಯಾವುದು?
5. ನಿರೂಪಕರ ಇಕಾಲಜಿಸ್ಟ್ ಗೆಳೆಯ ಯಾರು?

II. **ಈ ಕೆಳಗಿನವುಗಳಲ್ಲಿ ಯಾವುದಾದರೂ ಐದು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** **2x5=10**

6. ಸೂರ್ಯ ಮತ್ತು ದೀಪಗಳಿಂದಾಗುವ ಉಪಯೋಗಗಳಾವವು?
7. ಬಾನು ಮತ್ತು ಮರದ ನಿತ್ಯನೂತನತೆಯ ಬಗ್ಗೆ ಕವಿ ಬೇಂದ್ರೆ ಏನು ಹೇಳಿದ್ದಾರೆ?
8. ಸಿದ್ಲಿಂಗಿ ಏಕೆ ರಾದ್ಧಾಂತ ಮಾಡಿದಳು?
9. ಬ್ರಿಟಿಷರು ಬರುವ ಮೊದಲು ವಾಲ್‌ಪರೈ ಹೇಗಿತ್ತು?
10. ಮಠದವರಿಗೆ ಆನೆಗಿಂತ ವೇಲಾಯುಧನನ್ನು ಸಾಕಲು ತ್ರಾಸಾದುದೇಕೆ?
11. ಸೊರಗಿದ್ದ ಆನೆಯನ್ನು ಕೃಷ್ಣೇಗೌಡ ಹೇಗೆ ಸಾಕಿದ?

III. **ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ.** **3x2=6**

12. ಅನ್ಯ ಲಿಂಗಗಳ ನೆನೆವನೆ ನಿಮ್ಮ ಭಕ್ತನು.
13. ಈ ಮುಟ್ಟುವಿಕೆ ನಾನು ಊಹಿಸದೆ ಇದ್ದದ್ದನ್ನು ಮಾಡಿದೆ.
14. ನಮ್ಮ ಕಡೆ ಕೆಮ್ಮು ಕಾಲಿಂಗ್‌ಬೆಲ್ ಇದ್ದಹಾಗೆ

IV. **ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ :** **4x3=12**

15. ಸಮಾಜಕಂಟಕರ ಬಗೆಗೆ ಪುರಂದರದಾಸರ ಅಭಿಪ್ರಾಯಗಳನ್ನು ಸಂಗ್ರಹಿಸಿರಿ.
16. ಸಿಂಹಬಾಲದ ಕೋತಿಗಳು ಮತ್ತು ಹಾಡುಹಕ್ಕಿಗಳಿಗಾದ ಅನನುಕೂಲಗಳಾವುವು? ವಿವರಿಸಿ.

17. ಕಾಡಾನೆಗಳ ಹಾವಳಿ ನಿರೂಪಕರ ಅನುಭವಕ್ಕೆ ಬಂದುದು ಹೇಗೆ?

18. ಅರಣ್ಯ ಇಲಾಖೆಯ ಶತ್ರುಗಳ ಕಾರ್ಯಭಾರವನ್ನು ನಾಗರಾಜ ವಿವರಿಸಿದ್ದು ಹೇಗೆ

V. **ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ :** **5x1=5**

19. ಅರ್ಥರೇಖೆಯಿದ್ದಲ್ಲಿ ಫಲವೇನು, ಆಯುಷ್ಯರೇಖೆಯಿಲ್ಲದನ್ನಕ್ಕರ
ಹಂದೆಯ ಕೈಯಲ್ಲಿ ಚಂದ್ರಾಯುಧವಿದ್ದಲ್ಲಿ ಫಲವೇನು?
ಅಂಧಕನ ಕೈಯಲ್ಲಿ ದರ್ಪಣವಿದ್ದು ಫಲವೇನು?
ಮರ್ಕಟನ ಕೈಯಲ್ಲಿ ಮಾಣಿಕವಿದ್ದು ಫಲವೇನು?
ನಮ್ಮ ಕೂಡಲಸಂಗನ ಶರಣರನರಿಯದವರ ಕೈಯಲ್ಲಿ
ಲಿಂಗವಿದ್ದು ಫಲವೇನು? ಶಿವಪಥವನರಿಯದನ್ನಕ್ಕ.

20. ನಿಶೆಯಿಳಿದ ಉಷೆಯ, ಎಳನಗೆಯ ಬಗೆಗೆ, ಸೋತಿರಲು ಜಗವು ಸವಿಗೆ
ಕಣ್ಣಿದಿರು ಒಂದು, ಕಟ್ಟಿತ್ತು ಕನಸು; ಕೂಗೊಂದು ಬಂತು ಕಿವಿಗೆ.
ಮಕ್ಕಳಿರ ಕೇಳಿ, ರಸ ಕುಡಿಯಲೇಳಿ, ಹುಸಿನಿದ್ದೆಗಿದ್ದೆ ಸಾಕು
ಈ ತುಂಬಿ ಬಾಳು, ತುಂಬಿರುವ ತನಕ, ತುಂತುಂಬಿ ಕುಡಿಯಬೇಕು.

## ಭಾಷಾಭ್ಯಾಸ

VI. **ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ನಾಲ್ಕಕ್ಕೆ ಸೂಚನೆಗನುಗುಣವಾಗಿ ಉತ್ತರಿಸಿ :** **2x4=8**

21. ಈ ಪದಗಳಿಗೆ ನಾನಾರ್ಥಗಳನ್ನು ಬರೆಯಿರಿ : ಅಡಿ, ಹತ್ತಿ

22. ಈ ಪದಗಳ ವಿಭಕ್ತಿ ಪ್ರತ್ಯಯಗಳನ್ನು ಬರೆಯಿರಿ : ಬಿಸಿಲಲ್ಲಿ, ಪಾಪಿಗೆ

23. ಈ ಕ್ರಿಯಾಪದಗಳ 'ಧಾತು' ಗುರುತಿಸಿರಿ : ಓದಿದನು, ಎದ್ದರು

23. ಈ ಪದಗಳಲ್ಲಿನ ಗುಣವಾಚಕಗಳನ್ನು ಗುರುತಿಸಿರಿ : ಹಾಡುಹಕ್ಕಿ, ದುರ್ಜನ

24. ಈ ಕ್ರಿಯಾಪದಗಳ ಕಾಲವನ್ನು ಸೂಚಿಸಿರಿ : ಹುಡುಕುವನು, ಆಗಮಿಸಿದ

**ಆ) ಈ ಕೆಳಗಿನವುಗಳಲ್ಲಿ ಒಂದನ್ನು ಉತ್ತರಿಸಿರಿ :** **4x1=4**

53. ಪುಸ್ತಕವೊಂದನ್ನು ಕಳುಹಿಸಿಕೊಡುವಂತೆ ಕೋರಿ ಪುಸ್ತಕಾಲಯಕ್ಕೊಂದು ಪತ್ರ ಬರೆಯಿರಿ.

54. 'ಕೂತು ಉಂಡರೆ ಕುಡಿಕೆ ಹೊನ್ನು ಸಾಲದು' – ಈ ಗಾದೆಯನ್ನು ವಿಸ್ತರಿಸಿ ಬರೆಯಿರಿ

##############################